All India Radio: Bangalore

**Regional Bulletin In Kannada**
**03.01.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.01.2026 / 2.30 p.m.**
**<><><><>**

ಮುಖ್ಯಾಂಶಗಳು

1. ಕೇಂದ್ರ ಸರ್ಕಾರ ಜಿ-ರಾಮ್-ಜಿ ಹಿಂಪಡೆದು ಮನ್ರೇಗಾ ಕಾಯ್ದೆ ಪುನರ್‌ಜಾರಿಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹ
2. ಬೆಂಗಳೂರಿನಲ್ಲಿ ಮೂರನೇ ಅತಿದೊಡ್ಡ ಜೀವವೈವಿಧ್ಯ ಉದ್ಯಾನವನ ಸ್ಥಾಪಿಸಲು ಸರ್ಕಾರ ನಿರ್ಧಾರ
3. ಬಳ್ಳಾರಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತ ಸಾವಿನ ಪ್ರಕರಣ ; ಇಬ್ಬರು ಶಾಸಕರ ವಿರುದ್ಧ ಎಫ್‌ಐಆರ್ ದಾಖಲು ; ೪೫ ಮಂದಿ ವಶಕ್ಕೆ ಪಡೆದು ವಿಚಾರಣೆ
4. ವಿಜಯ್ ಹಜಾರೆ ಟೂರ್ನಿಯಲ್ಲಿ ದೇವದತ್ ಪಡಿಕ್ಕಲ್ ಆಕರ್ಷಕ ಶತಕ - ತ್ರಿಪುರಾಗೆ ೩೩೩ ರನ್‌ಗಳ ಗೆಲುವಿನ ಗುರಿ ನೀಡಿದ ಕರ್ನಾಟಕ

<><><><>

ಕೇಂದ್ರ ಸರ್ಕಾರ ಹಳ್ಳಿ ಅಧಿಕಾರ ಕಸಿದುಕೊಂಡು, ಗ್ರಾಮೀಣ ಆರ್ಥಿಕತೆಯನ್ನು ನಾಶಪಡಿಸಲು ಮುಂದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿಂದು ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ರದ್ಧತಿ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ವಿಕಸಿತ ಭಾರತ ಜಿ ರಾಮ್ ಜಿ ಹೆಸರಿನಲ್ಲಿ ಹೊಸ ಕಾಯ್ದೆ ಜಾರಿಗೆ ತರುವಾಗ, ರಾಜ್ಯ ಸರ್ಕಾರಗಳ ಅಭಿಪ್ರಾಯ ಕೇಳಿಲ್ಲ ಎಂದು ತಿಳಿಸಿದ್ದಾರೆ. ಮನಮೋಹನ ಸಿಂಗ್ ನೇತೃತ್ವದ ಯುಪಿಎ ಸರ್ಕಾರ ಉದ್ಯೋಗದ ಹಕ್ಕು, ಮಾಹಿತಿ ಹಕ್ಕು, ಶೈಕ್ಷಣಿಕ ಹಕ್ಕು ಮೊದಲಾದ ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಜನರಿಗೆ ಹೆಚ್ಚಿನ ಅಧಿಕಾರ ನೀಡುವ ಕಾರ್ಯ ಮಾಡಿತ್ತು. ಈ ಜನಪರ ಕಾಯ್ದೆಯನ್ನು ಹಿಂಪಡೆದುಕೊಳ್ಳುವ ಮೂಲಕ ಕಾರ್ಪೊರೇಟ್ ಕಂಪೆನಿಗಳಿಗೆ ಲಾಭ ಮಾಡಿಕೊಡುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡುತ್ತಿದೆ ಎಂದು ದೂರಿದ್ದಾರೆ. ಪ್ರಸ್ತುತ ಕಾಯ್ದೆಯಡಿ ೧೦೦ ದಿನ ಕನಿಷ್ಠ ಕೆಲಸ ನೀಡಬೇಕಾಗಿತ್ತು. ಹೊಸ ಕಾಯ್ದೆ ಸೆಕ್ಷನ್ ೫(೧) ಪ್ರಕಾರ ಸರ್ಕಾರ ಅಧಿಸೂಚಿತ ಪ್ರದೇಶದಲ್ಲಿ ಮಾತ್ರ ಉದ್ಯೋಗ ನೀಡಲಿದೆ. ಉದ್ಯೋಗ ದೊರೆಯುವ ಬಗ್ಗೆ ಯಾವುದೇ ಗ್ರಾಮ ಪಂಚಾಯತ್ ಗಳಿಗೂ ಖಾತ್ರಿಯಿರುವುದಿಲ್ಲ ಎಂದು ವಿವರಿಸಿದ್ದಾರೆ. ಈವರೆಗೆ ಕೇಂದ್ರ ಸರ್ಕಾರ ಪೂರ್ಣ ಅನುದಾನ ಭರಿಸುತ್ತಿತ್ತು. ಹೊಸ ಕಾಯ್ದೆ ಪ್ರಕಾರ ಶೇಕಡ ೬೦ ರಷ್ಟು ಕೇಂದ್ರ ಹಾಗೂ ಶೇಕಡ ೪೦ರಷ್ಟು ರಾಜ್ಯ ಸರ್ಕಾರ ಭರಿಸಲಿದೆ. ಇದು ರಾಜ್ಯಗಳ ಮೇಲೆ ಹೆಚ್ಚಿನ ಹಣಕಾಸು ಹೊರೆಯನ್ನು ಹೇರಲಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><><>

ವಿಶ್ವಗುರು ಬಸವಣ್ಣನ ಹೆಸರಿನಲ್ಲಿ ಬೆಂಗಳೂರಿನಲ್ಲಿ ಮೂರನೇ ಅತಿದೊಡ್ಡ ಜೀವವೈವಿಧ್ಯ ಉದ್ಯಾನವನ ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ. ೨೫೦ ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಘೋಷಿಸಿದ್ದಾರೆ. ಕರ್ನಾಟಕ ಅಭಿವೃದ್ಧಿ ನಿಗಮದ ಅಡಿಯಲ್ಲಿ ಬೆಂಗಳೂರು ಉತ್ತರಪ್ರದೇಶದ ಯಲಹಂಕ ಬಳಿಯ ಮಾದಪ್ಪನ ಹಳ್ಳಿಯಲ್ಲಿ ೧೫೩ ಎಕರೆ ಭೂಮಿಯನ್ನು ಈಗ ಯೋಜನೆಗಾಗಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಈ ಜೀವವೈವಿಧ್ಯ ಉದ್ಯಾನವನದಲ್ಲಿ ಔಷಧೀಯ ಸಸ್ಯಗಳನ್ನು ಬೆಳಸಲಾಗುವುದು. ಮಕ್ಕಳು ಹಾಗೂ ವಿದ್ಯಾರ್ಥಿಗಳ ಪ್ರಯೋಜನಕ್ಕಾಗಿ ವಿವಿಧ ಜಾತಿಯ ಮರಗಳನ್ನು ನೆಡಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

<><><>

ಬಳ್ಳಾರಿ ನಗರದಲ್ಲಿ ಜನವರಿ ೧ ರಂದು ಬ್ಯಾನರ್ ಸಂಬಂಧಿತ ವಿಷಯಕ್ಕೆ ಶಾಸಕ ಜನಾರ್ಧನ ರೆಡ್ಡಿ ನಿವಾಸದ ಬಳಿ ನಡೆದ ಗುಂಪು ಘರ್ಷಣೆ, ಫೈರಿಂಗ್, ಕಲ್ಲು ತೂರಾಟದ ಗಲಾಟೆಗೆ ಸಂಬಂಧಿಸಿದಂತೆ ದಾಖಲಿಸಿರುವ ಸ್ವಯಂ ಪ್ರೇರಿತ ದೂರಿನಡಿ  ಪೊಲೀಸರು ೪೫ ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಈ ೪೫ ಮಂದಿಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರು ಮತ್ತು ಸಾರ್ವಜನಿಕರು ಸೇರಿದ್ದಾರೆ. ಈ ನಡುವೆ ಹಿಂಸಾಚಾರ ಕುರಿತಂತೆ ಬಿಜೆಪಿ ಶಾಸಕ ಜನಾರ್ಧನ ರೆಡ್ಡಿ ಮತ್ತು ಕಾಂಗ್ರೆಸ್ ಶಾಸಕ ನಾರಾ ಭರತ್ ರೆಡ್ಡಿ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಬಳ್ಳಾರಿಯ ಬ್ರೂಸ್‌ಪೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಸಾವಿಗೆ ಕಾರಣವಾದ ಗುಂಡು ಹಾರಿಸಿದವರು ಯಾರು ಎಂಬ ಬಗ್ಗೆ ಪತ್ತೆ ಹಚ್ಚಲು ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ.

<><><>

ಬಳ್ಳಾರಿಯಲ್ಲಿ ನಡೆದ ಬ್ಯಾನರ್ ಘರ್ಷಣೆ ವಿಚಾರಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ತೀರ್ಮಾನ ತೆಗೆದುಕೊಳ್ಳಲಿದ್ದು, ಈ ವಿಚಾರದಲ್ಲಿ ರಾಜಕೀಯ ಸಲ್ಲದು ಎಂದು ವಿಧಾನಸಭಾಧ್ಯಕ್ಷ  ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಘಟನೆ ನಡೆಯಬಾರದಿತ್ತು, ಆದರೆ ನಡೆದುಹೋಗಿದೆ. ಇದೇ ವಿಷಯವನ್ನು  ಮುಂದಿಟ್ಟುಕ್ಕೊಂಡು ದ್ವೇಷದ ರಾಜಕಾರಣ ಮಾಡಬಾರದು ಎಂದು ಕಿವಿಮಾತು ಹೇಳಿದ್ದಾರೆ. ಜನಪ್ರತಿನಿಧಿಗಳು ಯಾವುದೇ ವಿಚಾರವಿದ್ದರೂ ಸೌಹಾರ್ದಯುತವಾಗಿ ಬಗೆಹರಿಸಬೇಕು ಎಂದು ತಿಳಿಸಿದ್ದಾರೆ.

<><><>

ಬೇಸಿಗೆ ಹಂಗಾಮಿನ ಬೆಳೆಗಳಿಗೆ ಭದ್ರಾ ಜಲಾಶಯದಿಂದ ಬಲದಂಡೆ ಹಾಗೂ ಎಡದಂಡೆ ಕಾಲುವೆಗಳಿಗೆ ನೀರು ಹರಿಸಲಾಗುತ್ತಿದ್ದು, ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನಾಲಾ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಭದ್ರಾ ಜಲಾಶಯ ಯೋಜನೆ ಅಚ್ಚುಕಟ್ಟು ವ್ಯಾಪ್ತಿಯ ಬೇಸಿಗೆ ಬೆಳೆಗಳಿಗೆ ಭದ್ರಾ ಬಲದಂಡೆ ನಾಲೆಗೆ ಇದೇ ೮ರ ರಾತ್ರಿಯಿಂದ ಹಾಗೂ ಎಡದಂಡ ನಾಲೆಗೆ ಇಂದು ರಾತ್ರಿ ನೀರು ಹರಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಕಾಲುವೆ ಪಾತ್ರಗಳಲ್ಲಿ

ಸಾರ್ವಜನಿಕರು ಮತ್ತು ರೈತರು ತಿರುಗಾಡುವುದು, ದನಕರುಗಳನ್ನು ತೊಳೆಯುವುದು ಮತ್ತು ದೈನಂದಿನ ಚಟುವಟಿಕೆ ಮಾಡುವುದನ್ನು ನಿ?ಧಿಸಲಾಗಿದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

<><><><>

ಮರ್ಯಾದಾ ಹತ್ಯೆ ಹಿನ್ನೆಲೆಯಲ್ಲಿ ಹುಬ್ಬಳ್ಳಿ ತಾಲೂಕಿನ ಇನಾಂ ವೀರಾಪುರ ಗ್ರಾಮಕ್ಕೆ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲುವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ ಭೇಟಿ ನೀಡಿ ಮಾನ್ಯಾ ಪತಿ ವಿವೇಕಾನಂದ ದೊಡ್ಡಮನಿ ಹಾಗೂ ಅವರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ. ೧೫ ನಿಮಿಷಕ್ಕೂ ಹೆಚ್ಚು ಕಾಲ ಕುಟುಂಬದವರೊಂದಿಗೆ ಚರ್ಚಿಸಿ ೫೦ ಸಾವಿರ ರೂಪಾಯಿ ಧನಸಹಾಯ ನೀಡಿದ್ದಾರೆ. ಬಳಿಕ ಹುಬ್ಬಳ್ಳಿ ವಿವೇಕಾನಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿವೇಕಾನಂದ ತಾಯಿ ಭೇಟಿಮಾಡಿ ಆರೋಗ್ಯ ವಿಚಾರಿಸಿದ್ದಾರೆ.

<><><><>

ಹಾವೇರಿ ಜಿಲ್ಲೆಯಲ್ಲಿ ಪದವೀಧರರ ಪಶ್ಚಿಮ ಮತಕ್ಷೇತ್ರದ ಚುನಾವಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ ೨೮ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಮತಗಟ್ಟೆ ಮಟ್ಟದ ಏಜೆಂಟರನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ನಡೆದ ರಾಜಕೀಯ ಪಕ್ಷದ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಬ್ಯಾಡಗಿ, ಹಿರೇಕೆರೂರು, ರಟ್ಟಿಹಳ್ಳಿ, ಸವಣೂರು ತಾಲ್ಲೂಕಿನಲ್ಲಿ ತಲಾ ಎರಡು ಮತಗಟ್ಟೆಗಳನ್ನು ತೆರೆಯಲಾಗಿದೆ. ಶಿಗ್ಗಾಂವಿ ತಾಲ್ಲೂಕಿನಲ್ಲಿ ಮೂರು, ಹಾನಗಲ್‌ನಲ್ಲಿ ನಾಲ್ಕು, ಹಾವೇರಿಯಲ್ಲಿ ಐದು ಹಾಗೂ ರಾಣೆಬೆನ್ನೂರಿನಲ್ಲಿ ಎಂಟು ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈಗಾಗಲೇ ನೋಂದಣಿ ಮಾಡಿರುವ ಅರ್ಹ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಹೆಸರು ಇಲ್ಲದಿದ್ದರೆ ಹಾಗೂ ಬದಲಾವಣೆ ಅಗತ್ಯವಿದ್ದರೆ, ತಿದ್ದುಪಡಿಗೂ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

<><><><>

ಕೋಲಾರದ ಇತಿಹಾಸ ಪ್ರಸಿದ್ಧ ಸಫಲಮ್ಮ ದೇವಿ ಹಾಗೂ ಭೀಮೇಶ್ವರ ಸ್ವಾಮಿ ದೇವಾಲಯದ ಹೆಸರಿನಲ್ಲಿರುವ ಜಮೀನನ್ನು ಯಾರೂ ಒತ್ತುವರಿ ಮಾಡಿಕೊಳ್ಳದಂತೆ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಸೂಚನೆ ನೀಡಿದ್ದಾರೆ. ಈ ದೇವಾಲಯಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಮುಜರಾಯಿ ಇಲಾಖೆ ಅನುದಾನದಡಿ ದೇವಾಲಯದ ಸುತ್ತಲೂ ಕಾಂಪೌಂಡ್ ನಿರ್ಮಿಸಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿನ ಮುಜರಾಯಿ ಇಲಾಖೆ ದೇವಾಲಯಗಳನ್ನು ಎ, ಬಿ ಹಾಗೂ ಸಿ ದರ್ಜೆಗಳಾಗಿ ವಿಂಗಡಿಸಲಾಗಿದ್ದು, ಸಫಲಮ್ಮ ದೇವಾಲಯದಲ್ಲಿ ವಾರ್ಷಿಕವಾಗಿ ೫ ಲಕ್ಷ ರೂಪಾಯಿಗೂ ಅಧಿಕ ಆದಾಯ ಇರುವುದರಿಂದ ಬಿ ಗ್ರೇಡ್ ಗೆ ಸೇರಿಸಲಾಗಿದೆ ಎಂದು ಹೇಳಿದ್ದಾರೆ.

<><><><>

ಗದಗ ಜಿಲ್ಲೆಯಲ್ಲಿ ೨೦೨೫-೨೬ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಚೇತನಾ ಪಾಟೀಲ್ ತಿಳಿಸಿದ್ದಾರೆ. ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ಗೂಗಲ್ ಪ್ಲೇಸ್ಟೋರ್‌ನಿಂದ "ಹಿಂಗಾರು ರೈತರ ಬೆಳೆ ಸಮೀಕ್ಷೆ ೨೦೨೫" ಆಪ್ ಅನ್ನು

ಡೌನ್‌ಲೋಡ್  ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕೆಂದು ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ. ಹಿಂಗಾರು ಹಂಗಾಮಿನ ಬೆಳೆಗಳ ವಿವರಗಳನ್ನು ದಾಖಲಿಸುವುದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

<><><><>

ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಸಹಯೋಗದಲ್ಲಿ ಹಾಸನದ ಹಿಮ್ಸ್ ಸಂಸ್ಥೆಯಲ್ಲಿ ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ಆಯೋಜಿಸಲಾಗಿದೆ ಎಂದು ನಿರ್ದೇಶಕ ರಾಜಣ್ಣ ತಿಳಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ರಾಷ್ಟ್ರಮಟ್ಟದ ಕಾರ್ಯಕ್ರಮವನ್ನು ಎರಡನೇ ಬಾರಿ ಹಾಸನದಲ್ಲಿ ನಡೆಸುವ ಸದಾವಕಾಶ ದೊರೆತಿರುವುದು ಹಿಮ್ಸ್ ಸಂಸ್ಥೆಗೆ ಹಾಗೂ ಹಾಸನ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದ್ದಾರೆ. ವಿದ್ಯಾರ್ಥಿಗಳಿಂದ ಮಾತ್ರ ಸದೃಢ ಭಾರತ ನಿರ್ಮಾಣ ಸಾಧ್ಯ ಎಂಬ ಉದ್ದೇಶದಿಂದ ಪ್ರತಿವರ್ಷ ಇಂತಹ ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ತ್ರಿಪುರಾ ವಿರುದ್ಧ ನಡೆಯುತ್ತಿರುವ ವಿಜಯ್ ಹಜಾರೆ ಟೂರ್ನಿಯ ಗ್ರೂಪ್ ಎ ಪಂದ್ಯದಲ್ಲಿ ಕರ್ನಾಟಕ ಪರ ದೇವದತ್ ಪಡಿಕ್ಕಲ್ ಶತಕ ಸಿಡಿಸಿದ್ದಾರೆ. ಕೇವಲ ೧೦೫ ಎಸೆತಗಳಲ್ಲಿ ಪಡಿಕ್ಕಲ್ ಶತಕ ಪೂರ್ಣಗೊಳಿಸಿದ್ದಾರೆ. ಇದು ವಿಜಯ್ ಹಜಾರೆ ಟೂರ್ನಿಯಲ್ಲಿ ದೇವದತ್ ಪಡಿಕ್ಕಲ್ ಅವರ ನಾಲ್ಕನೇ ಶತಕವಾಗಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ತ್ರಿಪುರಾ ತಂಡವು ಬೌಲಿಂಗ್ ಆಯ್ದುಕೊಂಡಿತ್ತು. ನಿಗದಿತ ೫೦ ಓವರ್‌ಗಳಲ್ಲಿ ಕರ್ನಾಟಕ ೭ ವಿಕೆಟ್ ನಷ್ಟಕ್ಕೆ ೩೩೨ ರನ್ ಗಳಿಸಿದೆ. ರವಿಚಂದ್ರನ್ ಸ್ಮರಣ್ ೬೦, ಅಭಿನವ್ ಮನೋಹರ್ ೭೯, ಕೆ.ಎಲ್.ರಾಹುಲ್ ೩೫ ರನ್ ಗಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>